# ನೇಮಕಾತಿ ಶಾಖೆ-4ರ ಕಾರ್ಯನಿರ್ವಹಣೆ

ನೇಮಕಾತಿ ಶಾಖೆ-4ರಲ್ಲಿ ಕರ್ನಾಟಕ ನಾಗರೀಕ ಸೇವೆಗಳು(ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) ನಿಯಮಗಳು 2006ರ ಮೇರೆಗೆ ಎ. ಬಿ ಮತ್ತು ಸಿ ಗುಂಪಿನ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

ಈ ನಿಯಮಗಳ ಮೇರೆಗೆ ತಾಂತ್ರಿಕ ಹುದ್ದೆಗಳನ್ನು ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳು ಮತ್ತು ಸಂದರ್ಶನದ ಮೂಲಕ ಹಾಗೂ ತಾಂತ್ರಿಕೇತರ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳು ಮತ್ತು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆಯು ಬಹುಆಯ್ಕೆ ಮಾದರಿಯದಾಗಿರುತ್ತದೆ.

ವಿವಿಧ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರ/ಇಲಾಖೆಗಳಿಂದ ಬೇಡಿಕೆ ಪತ್ರ ಸ್ವೀಕರಿಸಿದ ನಂತರ ಆಯೋಗವು ಸದರಿ ಪ್ರಸ್ತಾವನೆಯನ್ನು ಸರ್ಕಾರ/ಸಂಬಂಧಿತ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳೊಂದಿಗೆ ಪರಿಶೀಲಿಸಿ, ಪರಿಶಿಷ್ಟ ಜಾತಿ, ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಮೀಸಲಿರಿಸಿ ಮಾಡಲಾಗಿರುವ ಹುದ್ದೆಗಳ ವರ್ಗೀಕರಣದ ಸಮರ್ಪಕತೆಯನ್ನು ದೃಢಪಡಿಸಿಕೊಳ್ಳುತ್ತದೆ

ನಂತರ ಆಯೋಗವು ಸದರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅರ್ಹತಾ ಷರತ್ತುಗಳು, ಸ್ಪರ್ಧೆಯ ಸ್ವರೂಪ, ಭರ್ತಿ ಮಾಡಬೇಕಾದ ಹುದ್ದೆಗಳ ತಾತ್ಕಾಲಿಕ ಸಂಖ್ಯೆಗಳು ಮತ್ತು ಪರಿಶಿಷ್ಟ ಜಾತಿ, ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ನೀಡಲಾಗುವ ಮೀಸಲಾತಿ ಮತ್ತು ಇನ್ನಿತರೆ ಸಂಬಂಧಿತ ಮಾಹಿತಿಗಳನ್ನೊಳಗೊಂಡ ಅಧಿಸೂಚನೆಯನ್ನು ಜಾರಿ ಮಾಡಿ ಅದನ್ನು ಕರ್ನಾಟಕ ರಾಜ್ಯ ಪತ್ರ ಮತ್ತು ಹೆಚ್ಚು ಪ್ರಸಾರವುಳ್ಳ ಎರಡು ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಿಸುತ್ತದೆ.

ಸದರಿ ನಿಯಮಗಳ ಮೇರೆಗೆ ಸಂದರ್ಶನಕ್ಕೆ ಅರ್ಹರಾಗಲು ಆಯೋಗವು ನಡೆಸುವ ಕನ್ನಡಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಿರುತ್ತದೆ. ಆದರೆ, ಎಸ್ ಎಸ್ ಎಲ್ ಸಿ ಅಥವಾ ಅದಕ್ಕೆ ತತ್ಸಮಾನವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್ ಎಸ್ ಎಲ್ ಸಿ ಪರೀಕ್ಷೆಗಿಂತ ಮೇಲ್ಪಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ(ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಇದೇ ನಿಯಮಗಳಡಿ ಈ ಹಿಂದೆ ನಡೆಸಲ್ಪಟ್ಟ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ಅಭ್ಯರ್ಥಿಗಳು, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ಹೊಂದಿರುತ್ತಾರೆ.